

ಸುವರ್ಣ ಕರ್ನಾಟಕ - 2006

ಕರ್ನಾಟಕ ಸರ್ಕಾರ

ಸಂಖ್ಯೆ:ನಅಇ 31 ಬೆಂರೂಪ್ರಾ 2006

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:19.7.06

ಅಧಿಸೂಚನೆ

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 4-ಸಿ ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡವರುಗಳನ್ನು ಬೆಂಗಳೂರು ಮಹಾನಗರ ಪ್ರದೇಶದ ವ್ಯಾಪ್ತಿಯಲ್ಲಿನ ಯೋಜನಾ ಪ್ರಾಧಿಕಾರಗಳಿಗೆ ಅಧ್ಯಕ್ಷರು ಹಾಗು ಸದಸ್ಯರುಗಳನ್ನಾಗಿ ಸರ್ಕಾರದ ಇಚ್ಛಾನುಸಾರದವರೆಗೆ ಅಥವಾ ಮೂರು ವರ್ಷಗಳ ಅವಧಿಯವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ ನಾನು ನಿರ್ದೇಶನ ಮಾಡಲಾಗಿದೆ.

1. ಮೆಟ್ರೋಪಾಲಿಟನ್ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು .. ಅಧ್ಯಕ್ಷರು

2. ನಗರ ಯೋಜನಾ ಜಂಟಿ ನಿರ್ದೇಶಕರು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು (ಆನೇಕಲ್ ಯೋಜನಾ ಪ್ರಾಧಿಕಾರ) .. ಸದಸ್ಯ-ಕಾರ್ಯದರ್ಶಿ

3. ನಗರ ಯೋಜನಾ ಸಹಾಯಕ ನಿರ್ದೇಶಕರು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು (ಮಾಗಡಿ, ಕನಕಪುರ, ಬಿ.ಐ.ಎ.ಎ.ಪಿ.ಎ ಮತ್ತು ಹೊಸಕೋಟೆ ಯೋಜನಾ ಪ್ರಾಧಿಕಾರಗಳು) .. ಸದಸ್ಯ-ಕಾರ್ಯದರ್ಶಿ

4. ಸದರಿ - ಯೋಜನಾ ಪ್ರಾಧಿಕಾರದ ವ್ಯಾಪ್ತಿಯೊಳಗೆ ಬರುವ ಸ್ಥಳೀಯ ಸಂಸ್ಥೆಗಳ ಸದಸ್ಯರ ಪೈಕಿ ಒಬ್ಬ ಪ್ರತಿನಿದಿ. .. ಸದಸ್ಯರು

5. ಸದರಿ ಯೋಜನಾ ಪ್ರಾಧಿಕಾರದ ವ್ಯಾಪ್ತಿಯೊಳಗೆ ಬರುವ ಸ್ಥಳೀಯ ಸಂಸ್ಥೆಗಳ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳ ಪೈಕಿ ಒಬ್ಬ ಪ್ರತಿನಿದಿ. .. ಸದಸ್ಯರು

6. ರಾಜ್ಯ ಸರ್ಕಾರವು ಆಯ್ಕೆ ಮಾಡುವ ಇತರೆ ಮೂರು ಸದಸ್ಯರು(ಕರ್ನಾಟಕ ಯೋಜನಾ ಪ್ರಾಧಿಕಾರಗಳ ನಿಯಮಗಳು 1965ರನ್ವಯ ಅರ್ಹತೆ ಪಡೆದವರು): ಅದರಲ್ಲಿ ಒಬ್ಬ ಸದಸ್ಯರು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಕಾರ್ಯಕಾರಿ ಸದಸ್ಯರು, .. ಸದಸ್ಯರು

ನಗರ ಜಿಲ್ಲಾಧಿಕಾರಿಗಳು ಮತ್ತು ಉಳಿದ ಯೋಜನಾ ಪ್ರಾಧಿಕಾರಿಗಳಿಗೆ (ಕನಕಪುರ, ಮಾಗಡಿ, ನೆಲಮಂಗಲ ಮತ್ತು ಹೊಸಕೋಟೆ) ಗ್ರಾಮಾಂತರ ಜಿಲ್ಲಾಧಿಕಾರಿಗಳು ಹಾಗು ಆನೇಕಲ್ ಯೋಜನಾ ಪ್ರಾಧಿಕಾರಕ್ಕೆ ಬೆಂಗಳೂರು ನಗರ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಉಳಿದ ಯೋಜನಾ ಪ್ರಾಧಿಕಾರಗಳಿಗೆ (ಕನಕಪುರ ಪ್ರಾಧಿಕಾರ, ನೆಲಮಂಗಲ ಮತ್ತು ಹೊಸಕೋಟೆ) ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಎನ್.ವೈ.ಸಾಗರ) 19/7/06
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ
19.7

ಇವರಿಗೆ:

1. ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು
2. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ಪಂಚಾಯತ್, ಬೆಂಗಳೂರು
4. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು
5. ಜಂಟಿ ನಿರ್ದೇಶಕರು, ಬಿ.ಎಂ.ಆರ್.ಡಿ.ಎ, ಬೆಂಗಳೂರು
6. ಕಾರ್ಯಕಾರಿ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಬೆಂಗಳೂರು.
7. ಸಹಾಯಕ ನಿರ್ದೇಶಕರು, ಬಿ.ಎಂ.ಆರ್.ಡಿ.ಎ, ಬೆಂಗಳೂರು
8. ಆಯುಕ್ತರು/ಸದಸ್ಯ ಕಾರ್ಯದರ್ಶಿ, ಆನೇಕಲ್, ಹೊಸಕೋಟೆ, ಬಿಐಎಎಪಿಎ, ನೆಲಮಂಗಲ, ಕನಕಪುರ, ಮಾಗಡಿ, ಬಿಎಂಐಸಿಎಪಿಎ ಮತ್ತು ರಾಮನಗರಂ-ಚನ್ನಪಟ್ಟಣ ಪ್ರಾಧಿಕಾರಗಳು/ಸ್ಥಳೀಯ ಯೋಜನಾ ಪ್ರಾಧಿಕಾರಗಳು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ/ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ,
10. ತಹಶೀಲ್ದಾರ್, ಕನಕಪುರ/ಮಾಗಡಿ/ನೆಲಮಂಗಲ/ದೊಡ್ಡಬಳ್ಳಾಪುರ/ದೇವನಹಳ್ಳಿ/ಹೊಸಕೋಟೆ /ರಾಮನಗರ-ಚನ್ನಪಟ್ಟಣ ಮತ್ತು ಆನೇಕಲ್.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ,
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.